ಎಷ್ಟೆಷ್ಟು ನೀರನ್ನು ಕೊಡಬೇಕೋ, ಅದನ್ನು ಖಂಡಿತವಾಗಿ ಕೊಡುತ್ತೇವೆ. ಇದರ ಬಗ್ಗೆ ವಿವರವಾದ ಮಾಹಿತಿಯನ್ನು ಮಾನ್ಯ ಶಾಸಕರಿಗಷ್ಟೇ ಅಲ್ಲ, ಇಡೀ ಸದನಕ್ಕೆ ಕೊಡುವುದಕ್ಕೆ ಇಚ್ಚೆ ಪಡುತ್ತೇನೆ.

ಅಧ್ಯಕ್ಷರು: ಪ್ರಶ್ನೋತ್ತರ ವೇಳೆ ಮುಗಿಯಿತು.

ಆ. ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಸ್.ಸುರೇಶ್ ಕುಮಾರ್ (ಮಾನ್ಯ ಕಾನೂನು, ಮಾನದ ಹಕ್ಕು, ಸಂಸದೀಯ ವ್ಯವಹಾರ, ನಗರಾಭಿವೃದ್ಧಿ, ಬೆಂಗಳೂರು ಜಲಮಂಡಳಿ ಸಚಿವರು): ಮಾನ್ಯ ಅಧ್ಯಕ್ಷರೆ, ದಿನಾಂಕ:11–2–2013ರ 3ನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 72 ಪ್ರಶ್ನೆಗಳ ಪೈಕಿ 55 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಯಿತು.

(ಅನುಬಂಧ–1)

ಶ್ರೀ ಹೆಚ್.ಎಸ್.ಮಹದೇವ ಪ್ರಸಾದ್ : ಮಾನ್ಯ ಅಧ್ಯಕ್ಷರೆ ಶೂನ್ಯವೇಳೆ–ಯಲ್ಲಿ ಬಹಳ ದಿವಸಗಳಿಂದ pending ಇದೆ.

ಅಧ್ಯಕ್ಷರು: ಈಗ ಕಾವೇರಿ ವಿಷಯವನ್ನು ಪ್ರಸ್ತಾಪಿಸುತ್ತೇನೆ.

(ಗೊಂದಲ)

ಶ್ರೀ ಆರ್.ರೋಷನ್ ಬೇಗ್ : ಇಡೀ ರಾಜ್ಯದಲ್ಲಿ ವೈದ್ಯರು strike ಮಾಡುತ್ತಿದ್ದಾರೆ. ಆಸ್ಪತ್ರೆಗಳಲ್ಲಿ ರೋಗಿಗಳು ಸಾಯುತ್ತಿದ್ದಾರೆ. ಸರ್ಕಾರ ಹೇಳಿಕೆ ಕೊಡಲಿ. ಯಾವ ಸರ್ಕಾರಿ ಆಸ್ಪತ್ರೆಯಲ್ಲೂ ಕೂಡ function ಆಗುತ್ತಿಲ್ಲ.

(ಗೊಂದಲ)

ಅಧ್ಯಕ್ಷರು: ಯಾವುದಾದರೂ ಒಂದು ವಿಷಯವನ್ನು ತೆಗೆದುಕೊ–ಳ್ಳೋಣ. ಎಲ್ಲರೂ ಹೀಗೆ ಎದ್ದು ನಿಂತರೆ ಹೇಗೆ?

(ಗೊಂದಲ)

ಶ್ರೀ ಯು.ಟಿ.ಖಾದರ್ : ವೈದ್ಯರ strike ನಿಂದಾಗಿ ಒಬ್ಬ ರೋಗಿಯ ಜೀವ ಹೋಗಿದೆ. ಇವತ್ತು ಮಾನ್ಯ ಸಚಿವರು ರಾಜಿನಾಮೆ ಕೊಡಬೇಕು.